# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 316

ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 11.12.2024

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಹಲವು ಪಟ್ಟಣಗಳಲ್ಲಿ ಸುಸಜ್ಜಿತ ಬಸ್ ನಿಲ್ದಾಣಗಳು ಇಲ್ಲದಿರುವುದು ಹಾಗೂ ಈಗಾಗಲೇ ಇರುವ ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ, ಮಳೆಗಾಲದಲ್ಲಿ ಪ್ರಯಾಣಿಕರು ಆಶ್ರಯಿಸಲು ಕೂಡ ಯೋಗ್ಯವಲ್ಲದ ಬಸ್ ನಿಲ್ದಾಣಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ ಹಾಗೂ ಕೆ.ಕೆ.ಆರ್.ಡಿ.ಬಿ ಯಿಂದ ಇದುವರೆವಿಗೂ ಎಷ್ಟು ಹೊಸ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲಾಗಿದೆ ಹಾಗೂ ಯಾವ ಯಾವ ಪಟ್ಟಣಗಳಲ್ಲಿ ನಿರ್ಮಿಸಲಾಗಿದೆ: (ವಿವರಿಸುವುದು) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಪ್ರಮುಖ ಪಟ್ಟಣಗಳಲ್ಲಿ ಸುಸಜ್ಜಿತ ಬಸ್ ನಿಲ್ದಾಣಗಳನ್ನು ಅವಶ್ಯಕ ಮೂಲಭೂತ ಸೌಕರ್ಯಗಳೊಂದಿಗೆ ನಿರ್ಮಿಸಲಾಗಿರುತ್ತದೆ. ಕೆ.ಕೆ.ಆರ್.ಡಿ.ಬಿ ಅನುದಾನದಡಿಯಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಈ ಕೆಳಗಿನ ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗಿದೆ.<br>1. ಸೇಡಂ ಬಸ್ ನಿಲ್ದಾಣ<br>2. ಕಲಬುರಗಿ ಸೂಪರ್ ಮಾರ್ಕೆಟ್ ನಗರ ಸಾರಿಗೆ ಬಸ್ ನಿಲ್ದಾಣ. |
| ಆ) | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಪ್ರಸ್ತುತ ಎಷ್ಟು ಸಿಬ್ಬಂದಿಯನ್ನು ಹೊಂದಿದೆ ಹಾಗೂ ಸದರಿ ಸಿಬ್ಬಂದಿಗಳಿಗೆ ಮಾಸಿಕ ವೇತನಕ್ಕೆಂದು ಎಷ್ಟು ಹಣ ವೆಚ್ಚ ಮಾಡಲಾಗುತ್ತದೆ; | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಉದ್ಯೋಗಿಗಳ ಸಂಖ್ಯೆ 19559 (ಅಕ್ಟೋಬರ್-2024ರ ಅಂತ್ಯಕ್ಕೆ) ಇರುತ್ತದೆ.<br>ಕ.ಕ.ರ.ಸಾ. ನಿಗಮದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳಿಗೆ ಮಾಸಿಕ ವೇತನಕ್ಕೆಂದು ರೂ.82.88 ಕೋಟಿಗಳನ್ನು (ನವೆಂಬರ್-2024ರಂತೆ) ವೆಚ್ಚ ಮಾಡಲಾಗುತ್ತಿದೆ. |
| ಇ) | ಸದರಿ ಸಂಸ್ಥೆಯು ಆರ್ಥಿಕವಾಗಿ ಸದೃಢವಾಗಿದೆಯೇ, ಅಥವಾ ನಷ್ಟದ ಹಾದಿಯಲ್ಲಿದೆಯೇ<br>ಇದಕ್ಕೆ ಕಾರಣವೇನು, ಸಂಸ್ಥೆಯನ್ನು ಲಾಭದಾಯಕವಾಗಿ ಮಾಡಲು ಸರ್ಕಾರ ಚಿಂತನೆ ನಡೆಸಿದೆ (ವಿವರ ನೀಡುವುದು) | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಸಾರ್ವಜನಿಕ ಉದ್ದಿಮೆಯಾಗಿದ್ದು, ದಿನಾಂಕ: 15.08.2000ರಂದು ಅಸ್ತಿತ್ವಕ್ಕೆ ಬಂದಿರುತ್ತದೆ. ನಿಗಮವು ಪ್ರಾರಂಭವಾದಾಗಿನಿಂದಲೂ ನಷ್ಟವನ್ನು ಅನುಭವಿಸುತ್ತಾ ಬಂದಿದ್ದು, ನಷ್ಟಕ್ಕೆ ಈ ಕೆಳಗಿನ ಅಂಶಗಳು ಪ್ರಮುಖ ಕಾರಣಗಳಾಗಿವೆ.<br>1. ಇಂಧನ ದರದಲ್ಲಿ ಹೆಚ್ಚಳ<br>2. ವೇತನ ಹೆಚ್ಚಳ<br>3. ತುಟ್ಟಿ ಭತ್ಯೆ ಏರಿಕೆ<br>4. ಬಿಡಿ ಭಾಗಗಳ ದರದಲ್ಲಿ ಏರಿಕೆ<br>5. ಪ್ರಯಾಣ ದರದಲ್ಲಿ ಹೆಚ್ಚಳವಾಗದೇ ಇರುವುದು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ನಿಗಮಕ್ಕೆ ಪ್ರತಿ ವರ್ಷ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮತ್ತು ಹೊಸ ಬಸ್ಸುಗಳ ಖರೀದಿಗಾಗಿ SCSP/TSP, Capital Grant ಯೋಜನೆಗಳಡಿಯಲ್ಲಿ ಆರ್ಥಿಕ ನೆರವನ್ನು ಸರ್ಕಾರವು ಆಯವ್ಯಯದ ಮೂಲಕ ಒದಗಿಸುತ್ತಿದೆ. ಅಲ್ಲದೆ 2023-24ನೇ ಸಾಲಿನಲ್ಲಿ ರೂ.114.16 ಕೋಟಿಗಳ ಮೋಟಾರು ವಾಹನ ತೆರಿಗೆ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.<br><br>ನಿಗಮವು ರಾಜ್ಯದ ಜನತೆಗೆ ಉತ್ತಮ ಗುಣಮಟ್ಟದ, ವ್ಯವಸ್ಥಿತ, ಸುರಕ್ಷತೆ ಹಾಗೂ ಮಿತವ್ಯಯದಲ್ಲಿ ಸಾರಿಗೆ ಸೇವೆಯನ್ನು ನೀಡುತ್ತಿದೆ. ಸಾರ್ವಜನಿಕರಿಗೆ ಉತ್ತಮ ಸೇವೆ ಸಲ್ಲಿಸುವ ದೃಷ್ಟಿಯಿಂದ ಲಾಭದಾಯಕವಲ್ಲದ ಹಳ್ಳಿಗಾಡು ಪ್ರದೇಶಗಳಲ್ಲಿ ಸಹ ಸೇವೆಯನ್ನು ನೀಡುತ್ತಿದೆ. |

ಸಂಖ್ಯೆ: ಟಿಡಿ 207 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು